# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | (62) 34 |
| ಮಾನ್ಯ ಸದಸ್ಯರ ಹೆಸರು | : | ಶ್ರೀಗೋವಿಂದರಾಜು (ವಿಧಾನ ಸಭಾ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 08.12.2025 |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ವಿಶ್ವವಿದ್ಯಾಲಯಗಳಲ್ಲಿ 3 ಸಾವಿರ ಬೋಧಕ, 6 ಸಾವಿರ ಬೋಧಕೇತರ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದರೆ ಸರ್ಕಾರ ತೆಗೆದುಕೊಂಡ ಕ್ರಮವೇನು; | ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಬೋಧಕ ಮತ್ತು ಬೋಧಕೇತರ ಹುದ್ದೆಗಳು ಖಾಲಿಯಿದ್ದು, ಪ್ರಸ್ತುತ ಸರ್ಕಾರವು ಪರಿಶಿಷ್ಟ ಜಾತಿಗೆ ಸಂಬಂಧಿಸಿದಂತೆ ಒಳಮೀಸಲಾತಿಯನ್ನು ನಿಗದಿಪಡಿಸಿ ಆದೇಶವನ್ನು ಜಾರಿಗೊಳಿಸಿದ್ದು, ಸದರಿ ಆದೇಶದನ್ವಯ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳು ಮೀಸಲಾತಿ ಬಿಂದುಗಳನ್ನು ಪರಿಷ್ಕರಿಸಿ ನಂತರ ನೇಮಕಾತಿ ಪ್ರಕ್ರಿಯೆಯನ್ನು ನಡೆಸಬೇಕಾಗಿರುತ್ತದೆ.<br><br>ಅದರನ್ವಯ ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾಲಯಗಳು ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸೆಹಿಮ 2023, ದಿನಾಂಕ: 08.03.2023 ಹಾಗೂ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸೆಹಿಮ 2025, ದಿನಾಂಕ: 03.09.2025 ರನ್ವಯ ಪರಿಷ್ಕೃತ ಪ್ರಸ್ತಾವನೆಗಳನ್ನು ಸಲ್ಲಿಸುವಂತೆ ವಿಶ್ವವಿದ್ಯಾಲಯಗಳಿಗೆ ಸರ್ಕಾರದಿಂದ ನಿರ್ದೇಶನ ನೀಡಲಾಗಿರುತ್ತದೆ. ಅದರನ್ವಯ ವಿಶ್ವವಿದ್ಯಾಲಯಗಳಿಂದ ಸ್ವೀಕೃತವಾಗುವ ನೇಮಕಾತಿ ಪ್ರಸ್ತಾವನೆಗಳನ್ನು ಆದ್ಯತೆಯ ಮೇರೆಗೆ ಪರಿಗಣಿಸಿ ಕ್ರಮವಹಿಸಲಾಗುವುದು.<br><br>ಮುಂದುವರೆದು, ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಸೆಕ್ಷನ್ 59ರನ್ವಯ ವಿಶ್ವವಿದ್ಯಾಲಯಗಳಲ್ಲಿ ಸರ್ಕಾರದಿಂದ ಮಂಜೂರಾಗಿ ಖಾಲಿಯಿರುವ ಬೋಧಕ/ಬೋಧಕೇತರ ಹುದ್ದೆಗಳ ಎದುರಾಗಿ ಯುಜಿಸಿ ಮಾರ್ಗಸೂಚಿ ಹಾಗೂ ರಾಜ್ಯ ಸರ್ಕಾರದ ನೇಮಕಾತಿ ನಿಯಮಗಳನ್ವಯ ತಾತ್ಕಾಲಿಕವಾಗಿ ನೇಮಕ ಮಾಡಿಕೊಂಡು ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸಲಾಗುತ್ತಿದೆ. |
| ಆ) | ವಿಶ್ವವಿದ್ಯಾಲಯಗಳಲ್ಲಿ ಖಾಲಿ ಹುದ್ದೆ ಇರುವುದರಿಂದ ಇದು ಗುಣಮಟ್ಟದ ಶಿಕ್ಷಣದ ಮೇಲೆ ಹೊಡೆತ ಬೀಳುವುದಿಲ್ಲವೇ; ಖಾಲಿ ಇರುವಂತಹ ಹುದ್ದೆಗಳನ್ನು ಭರ್ತಿಮಾಡಲು ಸರ್ಕಾರ ಕ್ರಮಕೈಗೊಂಡಿದೆಯೇ; ಹಾಗಿದ್ದಲ್ಲಿ ಎಷ್ಟು ಅವಧಿ ಒಳಗೆ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು; | |
| ಇ) | ರಾಜ್ಯದಲ್ಲಿರುವ 32 ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಶೇ.70 ಹುದ್ದೆಗಳು ಖಾಲಿ ಇದ್ದರೆ ಕೆಲವು ವಿವಿಗಳಲ್ಲಿ ಶೇ.100 | |

| | | |
|---|---|---|
| | ರಷ್ಟು ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುತ್ತದೆ. |
| ಈ) | ಹೊಸದಾಗಿ ಆರಂಭವಾದ ವಿಶ್ವವಿದ್ಯಾಲಯಗಳಿಗೆ ಹುದ್ದೆಗಳು ಮಂಜೂರಾಗಿದ್ದು, ಇದುವರೆಗೂ ಹುದ್ದೆಗಳನ್ನು ಭರ್ತಿ ಮಾಡಿರುವುದಿಲ್ಲ; ಇದಕ್ಕೆ ಕಾರಣಗಳೇನು? (ಸಂಪೂರ್ಣ ವಿವರಗಳನ್ನು ಒದಗಿಸುವುದು) | ಹೊಸದಾಗಿ ಆರಂಭವಾಗಿರುವ ವಿಶ್ವವಿದ್ಯಾಲಯಗಳನ್ನು ಒಳಗೊಂಡಂತೆ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಆರ್ಥಿಕ ಸ್ಥಿತಿಗತಿಗಳನ್ನು ಪರಾಮರ್ಶಿಸಲು ಸಚಿವ ಸಂಪುಟ ಸಮಿತಿಯನ್ನು ರಚಿಸಿದ್ದು, ಸದರಿ ಸಮಿತಿಯು ವಿಶ್ವವಿದ್ಯಾಲಯಗಳ ನೇಮಕಾತಿ, ಸಂಶೋಧನೆ, ಮೂಲಭೂತ ಸೌಕರ್ಯ, ಅನುದಾನ, ಪಿಂಚಣಿ ಹಾಗೂ ಇನ್ನಿತರ ಅಗತ್ಯ ವಿಷಯಗಳ ಕುರಿತು ಹಲವಾರು ಸಭೆಗಳನ್ನು ಆರ್ಥಿಕ ಇಲಾಖೆ ಮತ್ತು ಉನ್ನತ ಶಿಕ್ಷಣ ಇಲಾಖೆಯೊಂದಿಗೆ ನಡೆಸಿದ್ದು, ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಪ್ರಸ್ತುತ ಖಾಲಿಯಿರುವ ಬೋಧಕ/ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಲು ಪರಿಶೀಲಿಸಲಾಗುತ್ತಿದೆ. |

**ಸಂಖ್ಯೆ: ಇಡಿ/505/ಯುಆರ್‌ಸಿ/2025**

**(ಡಾ|| ಎಂ.ಸಿ. ಸುಧಾಕರ್)**
**ಉನ್ನತ ಶಿಕ್ಷಣ ಇಲಾಖೆ**
**ಕರ್ನಾಟಕ ಸರ್ಕಾರ**